# ನಿಮ್ಮೊಡನೆ

## ಕನ್ನಡ ಮಾಧ್ಯಮಕ್ಕೆ ತಿಲಾಂಜಲಿ?

ಇಂಗ್ಲಿಷನ್ನು ಒಂದು ಭಾಷೆಯಾಗಿ ಕಲಿಯುವುದು ಬೇರೆ. ಶಿಕ್ಷಣ ಮಾಧ್ಯಮದ ಭಾಷೆಯಾಗುವುದು ಬೇರೆ. ಒಂದು ಭಾಷೆಯಾಗಿ ಕಲಿಯುವುದಕ್ಕೆ ಯಾರದೂ ವಿರೋಧ ಇರಲಾರದು. ಒಂದನೇ ತರಗತಿಯಿಂದ ಇಂಗ್ಲಿಷನ್ನು ಒಂದು ಭಾಷೆಯಾಗಿ ಕಲಿಸುವ ಪ್ರಕ್ರಿಯೆ ಸರ್ಕಾರಿ ಶಾಲೆಗಳಲ್ಲಿ ಈಗಾಗಲೇ ಆರಂಭವಾಗಿದೆ.

ಆರನೇ ತರಗತಿಯಿಂದ ಇಂಗ್ಲಿಷ್ ಮಾಧ್ಯಮ ಶಾಲೆಗಳನ್ನು ತೆರೆಯಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ. 2012–13ರ ಪ್ರಸಕ್ತ ಶೈಕ್ಷಣಿಕ ವರ್ಷ 341 ಇಂತಹ ಇಂಗ್ಲಿಷ್ ಮಾಧ್ಯಮದ ಸರ್ಕಾರಿ ಶಾಲೆಗಳಿಗೆ ಅನುಮತಿ ನೀಡಿರುವುದು, ಶಿಕ್ಷಣ ಮಾಧ್ಯಮದ ಕುರಿತ ಸರ್ಕಾರದ ಎಡಬಿಡಂಗಿ ನಿಲುವಿಗೆ ಸಾಕ್ಷಿಯಾಗಿದೆ. ಐದನೇ ತರಗತಿಯವರೆಗೂ ಮಾತೃಭಾಷೆಯಲ್ಲಿ ಶಿಕ್ಷಣ ಕಡ್ಡಾಯ. ಹಾಗಾಗಿ ಆರನೇ ತರಗತಿಯಿಂದ ಇಂಗ್ಲಿಷ್ ಮಾಧ್ಯಮದ ಜಾರಿಗೆ ಸರ್ಕಾರವೇ ಮುಂದಾಗಿದೆ! ಖಾಸಗಿ ಶಾಲೆಗಳ ವ್ಯಾಮೋಹ ತಡೆಗಟ್ಟಲು, ವಂತಿಗೆಗೆ ಕಡಿವಾಣ ಹಾಕಲು ಈ ಕ್ರಮಕ್ಕೆ ಮುಂದಾಗಿದೆ ಎಂಬುದು ಸರ್ಕಾರದ ಸಮಜಾಯಿಷಿ. ಪ್ರಾಥಮಿಕ ಶಿಕ್ಷಣ ಇಲಾಖೆಯ ನಿರ್ದೇಶಕ ದೇವಪ್ರಕಾಶ್ ಪ್ರಕಾರ ಇಂಗ್ಲಿಷ್ ಮಾಧ್ಯಮಕ್ಕೆ ಅನುಮತಿ ಪಡೆಯಲು ಅರ್ಹವಾದ ಶಾಲೆಗಳ ಸಂಖ್ಯೆ ಇನ್ನೂ ಹೆಚ್ಚೇ ಅಂದರೆ 400 ಇದೆ. ಮೂಲ ಸೌಕರ್ಯ, ಇಂಗ್ಲಿಷ್‌ನಲ್ಲಿ ಕಲಿಸುವ ಶಿಕ್ಷಕರ ಸಾಮರ್ಥ್ಯ, ವಿದ್ಯಾರ್ಥಿಗಳ ಸಂಖ್ಯೆಯ ಆಧಾರದ ಮೇಲೆ ಶಾಲಾ ಅಭಿವೃದ್ಧಿ ಸಮಿತಿ ಸರ್ಕಾರಕ್ಕೆ ಮನವಿ ಮಾಡಿದರೆ– ಅಂತಹ ಕಡೆ ಇಂಗ್ಲಿಷ್ ಮಾಧ್ಯಮದ ಶಾಲೆಗಳನ್ನು ಆರಂಭಿಸಬಹುದಾಗಿದೆ ಎಂದೂ ಅವರು ಸಮರ್ಥಿಸಿಕೊಳ್ಳುತ್ತಾರೆ. ಸರ್ಕಾರದ ನಡಿಗೆಯ ಈ ವೇಗವನ್ನು ಗಮನಿಸಿದರೆ ಒಂದನೇ ತರಗತಿಯಿಂದಲೇ ಇಂಗ್ಲಿಷ್ ಮಾಧ್ಯಮ ಯಾಕೆ ಬೇಡ ಎಂಬ ತರ್ಕಕ್ಕೆ ಬಂದು ನಿಲ್ಲುತ್ತದೆ. ಆಂಗ್ಲಮಯ ಕನ್ನಡ ನಾಡನ್ನು ನೋಡಲು ಹೆಚ್ಚು ದಿನ ಕಾಯಬೇಕಿಲ್ಲ! ಆರು ಮತ್ತು ಏಳನೇ ತರಗತಿಯನ್ನು ಸರ್ಕಾರಿ ಇಂಗ್ಲಿಷ್ ಮಾಧ್ಯಮ ಶಾಲೆಗಳಲ್ಲಿ ಓದಿದ ಬಡಹುಡುಗರ ಮುಂದಿನ ಭವಿಷ್ಯ ಏನು? ಖಾಸಗಿ ಶಾಲೆಗಳಲ್ಲಿ ಅವರಿಗೆ ಪ್ರವೇಶ ಅಸಾಧ್ಯ. ಆಗ ಮತ್ತೆ ಸರ್ಕಾರ ಹೈಸ್ಕೂಲ್ ಮಟ್ಟದಲ್ಲೂ ಮತ್ತಷ್ಟು ಇಂಗ್ಲಿಷ್ ಮಾಧ್ಯಮದ ಶಾಲೆಗಳನ್ನು ಆರಂಭಿಸುವುದೇ? ಕ್ರಮೇಣ ಕನ್ನಡ ಮಾಧ್ಯಮ ಶಾಲೆಗಳಿಗೆ ತಿಲಾಂಜಲಿ?

ಸಹಜವಾಗಿ ಕನ್ನಡಪರ ಸಂಘಟನೆಗಳು, ಸಾಹಿತಿಗಳು ಆಕ್ರೋಶಗೊಂಡಿದ್ದಾರೆ. ಸರ್ಕಾರದ ನೀತಿ ವಿರುದ್ಧ ಹೋರಾಟಕ್ಕೆ ಸಜ್ಜಾಗುತ್ತಿದ್ದಾರೆ. ಸಾಹಿತಿಗಳ ಸಭೆ ನಡೆಸಿದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪುಂಡಲೀಕ ಹಾಲಂಬಿ ಅವರು, 'ಸರ್ಕಾರ ಇಂಗ್ಲಿಷ್ ಮಾಧ್ಯಮದ ಶಾಲೆಗಳಿಗೆ ಅನುಮತಿ ನೀಡಿದರೆ ಕನ್ನಡ ಸಾಹಿತ್ಯ ಪರಿಷತ್ತು ಕೈಕಟ್ಟಿ ಕೂಡುವುದಿಲ್ಲ. ಮತ್ತೊಂದು ಗೋಕಾಕ ಮಾದರಿಯ ಚಳವಳಿಗೆ ಕರೆ ನೀಡುತ್ತದೆ. ರಾಜ್ಯ ಸರ್ಕಾರ ಸಾಹಿತ್ಯ ಪರಿಷತ್ತಿಗೆ ಅನುದಾನ ನೀಡುತ್ತದೆ ಎಂದ ಮಾತ್ರಕ್ಕೆ ಅದರ ಎಲ್ಲ ನೀತಿಗಳನ್ನು ಒಪ್ಪಿಕೊಳ್ಳಲಾಗುವುದಿಲ್ಲ. ಪರಿಷತ್ತಿನ ಕೇಂದ್ರ ಕಚೇರಿಯಲ್ಲಿ ನಾನು ಆಮರಣ ಉಪವಾಸ ನಡೆಸುತ್ತೇನೆ' ಎಂದು ಎಚ್ಚರಿಕೆ ನೀಡಿದ್ದಾರೆ.

ಸರ್ಕಾರದಿಂದ ಅನುದಾನ ಪಡೆದರೂ, ಕನ್ನಡ ಸಾಹಿತ್ಯ ಪರಿಷತ್ತು ಒಂದು ಸ್ವಾಯತ್ತ ಸಂಸ್ಥೆ. ಸರ್ಕಾರದ ಅಣತಿಯಂತೆ ಅದು ನಡೆಯಬೇಕಿಲ್ಲ. ಕನ್ನಡಿಗರ ಪರವಾಗಿ ಸ್ವಂತ ನಿರ್ಧಾರ ಕೈಗೊಳ್ಳುವ ಹಕ್ಕು ಪರಿಷತ್ತಿಗೆ ಇದ್ದೇ ಇದೆ. ಹಾಗಾಗಿ ಹಾಲಂಬಿ ಅವರ ಹೇಳಿಕೆ ಸರಿಯಾಗಿಯೇ ಇದೆ. ಇನ್ನು ಸರ್ಕಾರದ ಭಾಗವೇ ಆದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ 'ಮುಖ್ಯಮಂತ್ರಿ' ಚಂದ್ರು ಅವರೂ, ಇಂಗ್ಲಿಷ್ ಮಾಧ್ಯಮ ಶಾಲೆಗಳನ್ನು ವಿರೋಧಿಸಿ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.

ಇಂಗ್ಲಿಷನ್ನು ಒಂದು ಭಾಷೆಯಾಗಿ ಕಲಿಯುವುದು ಬೇರೆ. ಶಿಕ್ಷಣ ಮಾಧ್ಯಮದ ಭಾಷೆಯಾಗುವುದು ಬೇರೆ. ಒಂದು ಭಾಷೆಯಾಗಿ ಕಲಿಯುವುದಕ್ಕೆ ಯಾರದೂ ವಿರೋಧ ಇರಲಾರದು. ಒಂದನೇ ತರಗತಿಯಿಂದ ಇಂಗ್ಲಿಷನ್ನು ಒಂದು ಭಾಷೆಯಾಗಿ ಕಲಿಸುವ ಪ್ರಕ್ರಿಯೆ ಸರ್ಕಾರಿ ಶಾಲೆಗಳಲ್ಲಿ ಈಗಾಗಲೇ ಆರಂಭವಾಗಿದೆ. ಹಾಗೆ ಒಂದು ಭಾಷೆಯಾಗಿ ಕಲಿತವರು ಕಾಲೇಜು ಶಿಕ್ಷಣದ ಇಂಗ್ಲಿಷ್ ವಾತಾವರಣಕ್ಕೆ ಬಹುಬೇಗ ಹೊಂದಿಕೊಂಡಿದ್ದಾರೆ. ಇಂಗ್ಲಿಷ್ ಮಾಧ್ಯಮಕ್ಕಿಂತ ಮಾತೃಭಾಷೆಯ ಮಾಧ್ಯಮದಲ್ಲಿ ಓದಿದವರು ಹೆಚ್ಚಿನ ಪ್ರತಿಭೆ, ಸೃಜನಶೀಲತೆಯನ್ನು ಮೆರೆದಿರುವುದಕ್ಕೆ ಹಲವು ಉದಾಹರಣೆಗಳು ಸಿಗುತ್ತವೆ.

ಇನ್ನು ತಂತ್ರಾಂಶ ಸೇರಿದಂತೆ ಉನ್ನತ ಶಿಕ್ಷಣದ ಎಲ್ಲ ಹಂತಗಳಲ್ಲೂ ಕನ್ನಡವೇ ಮಾಧ್ಯಮವಾಗಿರಬೇಕು. ಕನ್ನಡ ಮಾಧ್ಯಮದಲ್ಲಿ ಓದದಿದ್ದರೆ ಕೆಲಸವೇ ಸಿಗುವುದಿಲ್ಲ ಎಂಬ ವಾತಾವರಣ ಉಂಟಾದರೆ ಎಲ್ಲರೂ ಕನ್ನಡ ಮಾಧ್ಯಮದಲ್ಲೇ ಓದುತ್ತಾರೆ ಎಂಬುದು ಒಂದು ಆದರ್ಶದ ಸ್ಥಿತಿ. ಸರ್ಕಾರದ ಪ್ರಯತ್ನಗಳು ಈ ನಿಟ್ಟಿನಲ್ಲಿ ಇರಬೇಕೇ ಹೊರತು, ಇಂಗ್ಲಿಷ್ ಮಾಧ್ಯಮ ಶಾಲೆಗಳನ್ನು ಆರಂಭಿಸುವ ಕಡೆಗಲ್ಲ.

ಪ್ರತಿಭಟನೆಗೆ ಸ್ಪಂದಿಸಿದ ಶಿಕ್ಷಣ ಸಚಿವ ವಿಶ್ವೇಶ್ವರ ಹೆಗಡೆ ಕಾಗೇರಿಯವರು 'ಆರನೇ ತರಗತಿಯಿಂದ ಇಂಗ್ಲಿಷ್ ಮಾಧ್ಯಮದ ಕುರಿತು ಯಾವುದೇ ಆದೇಶ ಆಗಿಲ್ಲ. ಮುಖ್ಯಮಂತ್ರಿ ಜತೆ ಚರ್ಚಿಸಿ ಈ ಕುರಿತು ನಿರ್ಣಯ ಕೈಗೊಳ್ಳುವೆ' ಎಂದು ಹೇಳಿದ್ದಾರೆ. ಕನ್ನಡ ಮಾಧ್ಯಮದ ಭವಿಷ್ಯ ಕನ್ನಡಪರ ಹೋರಾಟದ ಯಶಸ್ಸನ್ನು ಅವಲಂಬಿಸಿದೆ.

■ ಗುಡಿಹಳ್ಳಿ ನಾಗರಾಜ




ಗಣೇಶ